ಕರ್ನಾಟಕ ಸರ್ಕಾರ

ಸಂಖ್ಯೆ: ಕಾಇ 170 ಸ್ಕೀಮರ 2018 (ಭಾಗ-5)

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸಸೌಧ
ಬೆಂಗಳೂರು, ದಿನಾಂಕ:18.04.2020

# ಸುತ್ತೋಲೆ

ವಿಷಯ: ಕೋರೋನ ವೈರಸ್ ಹರಡುತ್ತಿರುವ ಹಿನ್ನಲೆಯಲ್ಲಿ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವ ಬಗ್ಗೆ.

ಉಲ್ಲೇಖ: ಸರ್ಕಾರದ ಸಮಸಂಖ್ಯೆಯ ಸುತ್ತೋಲೆ ದಿನಾಂಕ: 18.03.2020 ಹಾಗೂ 21.03.2020, 29-03-2020.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕೊರೋನ ವೈರಸ್ ಹರಡುತ್ತಿರುವ ಹಿನ್ನಲೆಯಲ್ಲಿ ಕಾರ್ಮಿರಿಗೆ ಅರಿವು ಮೂಡಿಸಲು ಹಾಗೂ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವ ಬಗ್ಗೆ ನಿರ್ದೇಶನಗಳನ್ನು ಕಾರ್ಮಿಕ ಅಧಿಕಾರಿಗಳಿಗೆ ಉಲ್ಲೇಖಿತ ಸರ್ಕಾರದ ಸುತ್ತೋಲೆಗಳಲ್ಲಿ ನೀಡಲಾಗಿದೆ. ಪ್ರತಿ ಕಾರ್ಮಿಕ ಅಧಿಕಾರಿಗೆ ಅನುದಾನವನ್ನು ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ ಹಾಗೂ ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯವತಿಯಿಂದ ಬಿಡುಗಡೆ ಮಾಡಲಾಗಿರುತ್ತದೆ.

ಸರ್ಕಾರದ ದಿನಾಂಕ: 21.03.2020ರ ಸುತ್ತೋಲೆಯಲ್ಲಿ ಭಾರತೀಯ ರೆಡ್ ಕ್ರಾಸ್ ಸೊಸೈಟಿ ಮೂಲಕ ಸಮನ್ವಯ ನಡೆಸಿ ಕಾರ್ಯಕ್ರಮವನ್ನು ಯಶ್ವಸಿಗೊಳಿಸುವಂತೆ ಸೂಚಿಸಲಾಗಿದೆ ರೆಡ್ ಕ್ರಾಸ್ ಸಂಸ್ಥೆಯು ಕೆ.ಟಿ.ಪಿ.ಪಿ ಕಾಯ್ದೆಯಡಿ 4ಜಿ ವಿನಾಯತಿಯನ್ನು ಪಡೆದಿರುತ್ತದೆ.

ದಿನಾಂಕ: 29-03-2020ರ ಸುತ್ತೋಲೆಯಲ್ಲಿ ಎಲ್ಲಾ ಕಾರ್ಮಿಕ ಅಧಿಕಾರಿಗಳು, ಸೈನಿಕ್ ಕಿಟ್ (30 masks, 3 sanitizers (small) Safety coat and cap ) ಗಳನ್ನು ಭಾರತೀಯ ರೆಡ್ ಕ್ರಾಸ್ ಸಂಸ್ಥೆಗೆ ಕಾರ್ಯಾದೇಶ ನೀಡುವಂತೆ ಈ ಮೂಲಕ ಸೂಚಿಸಿದೆ.

ಮುಂದುವರೆದು, ಸದರಿ ಮೊತ್ತವನ್ನು ಕೋರೋನಾ ಜಾಗೃತಿ ಮೂಡಲಿಸಲು ಅಗತ್ಯವಿರುವ ಸ್ಯಾನಿಟೈಸರ್, ಮಾಸ್ಕ್ ಮತ್ತು ಬ್ಯಾಗ್ ಇತ್ಯಾದಿ ವಸ್ತುಗಳಿಗಲ್ಲದೆ, ಅಗತ್ಯವಿರುವ ತಯಾರಿಸಿದ ಆಹಾರ ಪೂರೈಕೆಗೂ (ಊಟದ ವ್ಯವಸ್ಥೆಗೂ) ಉಪಯೋಗಿಸುವಂತೆ ಸೂಚಿಸಿದೆ.

ಸಂಧ್ಯಾ ಎಲ್.ನಾಯಕ್
ಸರ್ಕಾರದ ಉಪ ಕಾರ್ಯದರ್ಶಿ
ಕಾರ್ಮಿಕ ಇಲಾಖೆ

ಪ್ರತಿಯನ್ನು:

1) ಕಾರ್ಮಿಕ ಆಯುಕ್ತರು, ಕಾರ್ಮಿಕ ಭವನ, ಡೈರಿ ವೃತ್ತ, ಬೆಂಗಳೂರು
2) ಕಾರ್ಯದರ್ಶಿ, ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ, ಬೆಂಗಳೂರು

3) ನಿರ್ದೇಶಕರು, ಕಾರ್ಖಾನೆಗಳು, ಬಾಯ್ಲರುಗಳ ಸುರಕ್ಷತೆ ಮತ್ತು ಸ್ವಾಸ್ಥ ಇಲಾಖೆ, ಬೆಂಗಳೂರು
4) ನಿರ್ದೇಶಕರು, ಕಾರ್ಮಿಕ ರಾಜ್ಯ ವಿಮಾ ಯೋಜನೆ, ವೈದ್ಯಕೀಯ ಸೇವೆಗಳು, ರಾಜಾಜಿನಗರ, ಬೆಂಗಳೂರು
5) ಜಂಟಿ ಕಾರ್ಮಿಕ ಆಯುಕ್ತರು, ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ, ಬೆಂಗಳೂರು
6) ಎಲ್ಲಾ ಜಿಲ್ಲೆಗಳ ಕಾರ್ಮಿಕ ಅಧಿಕಾರಿಗಳು.

ಪ್ರತಿಯನ್ನು ಮಾಹಿತಿಗಾಗಿ
ವಿಶೇಷಾಧಿಕಾರಿ, ಕೋವಿಡ್-19, ಕಾರ್ಮಿಕ ಇಲಾಖೆ, ಬೆಂಗಳೂರು.
ಮಾನ್ಯ ಇಲಾಖಾ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಬೆಂಗಳೂರು.